**Akashvani : Bangalore**
**National Bulletin In Kannada**
**14.04.2024 / 7.35 am**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<><*<><>*><>

<u>ಮುಖ್ಯಾಂಶಗಳು</u>

೧. ಇಂದು ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಜನ್ಮದಿನ; ದೇಶಾದ್ಯಂತ ಗೌರವ ನಮನ

೨. ಲೋಕಸಭಾ ಚುನಾವಣೆ; ಬಿರುಸುಗೊಂಡ ರಾಜಕೀಯ ಪಕ್ಷಗಳ ಪ್ರಚಾರ; ಕರ್ನಾಟಕದಲ್ಲಿ ಇಂದು ಪ್ರಧಾನಿ ರೋಡ್ ಶೋ

೩. ಗೋವಾದಲ್ಲಿಂದು ನೌಕಪಡೆ ಸಿಬ್ಬಂದಿಗೆ ಶೌರ್ಯ - ವಿಶಿಷ್ಟ ಸೇವಾ ಪ್ರಶಸ್ತಿ ಪ್ರಧಾನ

೪. ಐಪಿಎಲ್ ಟಿ-೨೦ ಕ್ರಿಕೆಟ್; ಪಂಜಾಬ್ ಕಿಂಗ್ಸ್ ತಂಡಕ್ಕೆ ರಾಜಸ್ತಾನ್ ರಾಯಲ್ಸ್ ವಿರುದ್ಧ ೩ ವಿಕೆಟ್ ಜಯ

<><*<><>*><>

ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬೀಮ್ ರಾವ್ ಅಂಬೇಡ್ಕರ್ ಅವರ ೧೩೩ನೇ ಜಯಂತಿ ಸಂದರ್ಭದಲ್ಲಿ ಇಂದು ಅವರಿಗೆ ದೇಶಾದ್ಯಂತ ಗೌರವ ನಮನಗಳನ್ನು ಸಲ್ಲಿಸಲಾಗುತ್ತಿದೆ. ಈ ಸಂಬಂಧ ದೇಶಾದ್ಯಂತ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸಂಸತ್ ಭವನದ ಆವರಣದಲ್ಲಿ ನಡೆಯಲಿರುವ ಮುಖ್ಯ ಕಾರ್ಯಕ್ರಮದಲ್ಲಿ ಡಾ.ಅಂಬೇಡ್ಕರ್ ಅವರ ಪ್ರತಿಮೆಗೆ ಪುಷ್ಪ ನಮನ ಸಲ್ಲಿಸಲಾಗುವುದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಡಾ.ಬಿ.ಆರ್.ಅಂಬೇಡ್ಕರ್ ಅವರ ಜನ್ಮದಿನದ ಮುನ್ನದಿನವಾದ ನಿನ್ನೆ ನೀಡಿದ ಸಂದೇಶದಲ್ಲಿ ಡಾ.ಅಂಬೇಡ್ಕರ್ ಅವರ ಆದರ್ಶಗಳನ್ನು ಅನುಸರಿಸಿ, ಎಲ್ಲರನ್ನೂ ಒಳಗೊಂಡ ದೇಶದ ಅಭಿವೃದ್ಧಿಗೆ ಒಟ್ಟಾಗಿ ಶ್ರಮಿಸುವಂತೆ ಕರೆ ನೀಡಿದ್ದಾರೆ. ನ್ಯಾಯಪರರಾಗಿ, ಶಿಕ್ಷಣತಜ್ಞರಾಗಿ, ಆರ್ಥಿಕ ಪರಿಣಿತರಾಗಿ, ಸಾಮಾಜಿಕ ಸುಧಾರಕರಾಗಿ ಹಾಗೂ ರಾಜಕೀಯ ಧುರೀಣರಾಗಿ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರು, ದೇಶಕ್ಕೆ ಹಾಗೂ ಸಮಾಜಕ್ಕೆ ಅನನ್ಯ ಕೊಡುಗೆ ನೀಡಿದ್ದಾರೆ ಎಂದು ರಾಷ್ಟ್ರಪತಿಗಳು ಹೇಳಿದ್ದಾರೆ. ಅವರು ಬಲವಾಗಿ ನಂಬಿದ್ದ ಸಂವಿಧಾನ ಪದ್ಧತಿ ಇಂದಿಗೂ ಕೂಡ ನಮ್ಮ ಪ್ರಜಾತಂತ್ರದ ಮತ್ತು ಉತ್ತಮ ಆಡಳಿತದ ಅಡಿಪಾಯವಾಗಿದೆ ಎಂದು ಅವರು ತಿಳಿಸಿದ್ದಾರೆ.

ಡಾ.ಅಂಬೇಡ್ಕರ್ ಅವರು, ದೀನರ ಉನ್ನತಿಗಾಗಿ ಜೀವನವಿಡಿ ಸಮರ್ಪಣಾ ಮನೋಭಾವದಿಂದ ಹೋರಾಟ ಮಾಡಿದರು ಎಂದು ರಾಷ್ಟ್ರಪತಿಗಳು ಸ್ಮರಿಸಿದ್ದಾರೆ. ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ತಮ್ಮ ಸಂದೇಶದಲ್ಲಿ, ಭಾರತದ ಮಹಾನ್ ಪುತ್ರ ಡಾ.ಅಂಬೇಡ್ಕರ್ ಅವರು ಭಾರತೀಯ ಸಂವಿಧಾನದ ಶಿಲ್ಪಿ ಮಾತ್ರವಲ್ಲದೆ, ಸಾಮಾಜಿಕ ನ್ಯಾಯದ ಪ್ರತಿಪಾದಕರಾಗಿದ್ದರು. ಸಾಮಾಜಿಕ ಅಸಮಾನತೆಗಳು ಮತ್ತು ತಾರತಮ್ಯವನ್ನು ತೊಡೆದುಹಾಕಲು ಅವರ ನಿರಂತರ ಪ್ರಯತ್ನಗಳು ಎಲ್ಲರಿಗೂ ಸ್ಫೂತಿದಾಯಕವಾಗಿವೆ ಎಂದರು ಹೇಳಿದರು. ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿ ಅಂಗವಾಗಿ ಬೃಹನ್ ಮುಂಬೈ ನಗರ ಪಾಲಿಕೆ, ವಿವಿಧ ಕಾರ್ಯಕ್ರಮಗಳನ್ನು ವ್ಯವಸ್ಥೆ ಮಾಡಿದೆ. ಡಾ.ಅಂಬೇಡ್ಕರ್ ಸ್ಮಾರಕ ಚೈತ್ಯ ಭೂಮಿ ಹಾಗೂ ಅವರ ನಿವಾಸ ರಾಜಗೃಹ ಹಾಗೂ ಸುತ್ತಮುತ್ತಲಿನ ಪ್ರದೇಶಗಳನ್ನು ಅಲಂಕಾರಗೊಳಿಸಲಾಗಿದೆ. ಡಾ.ಬಿ.ಆರ್.ಅಂಬೇಡ್ಕರ್ ಅವರ ಜೀವನ ಆಧರಿತ ಛಾಯಚಿತ್ರ ಪ್ರದರ್ಶನವನ್ನು ಚೈತ್ಯ ಭೂಮಿಯಲ್ಲಿ ವ್ಯವಸ್ಥೆ ಮಾಡಲಾಗಿದೆ.

<><*<><>*><>

ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ಇಂದು ಕರ್ನಾಟಕದ ಮೈಸೂರು ಹಾಗೂ ಮಂಗಳೂರಿನಲ್ಲಿ ಚುನಾವಣಾ ಪ್ರಚಾರ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಎನ್‌ಡಿಎ ಒಕ್ಕೂಟದ ಅಭ್ಯರ್ಥಿಗಳ ಪರವಾಗಿ ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಏರ್ಪಡಿಸಿರುವ ಬೃಹತ್ ವೇದಿಕೆಯಲ್ಲಿ ಭಾಗವಹಿಸಿ ನಾಲ್ಕು ಲೋಕಸಭಾ ಕ್ಷೇತ್ರಗಳ ಮತದಾರರನ್ನು ಕುರಿತು ಭಾಷಣ ಮಾಡಲಿದ್ದಾರೆ. ನಂತರ ಮಂಗಳೂರಿನಲ್ಲಿ ಲೇಡಿಹಿಲ್ ಬಳಿಯ ಶ್ರೀ ನಾರಾಯಣಗುರು ವೃತ್ತದಿಂದ ರಾಷ್ಟ್ರಕವಿ ಮಂಜೇಶ್ವರ ಗೋವಿಂದ ಪೈ ವೃತ್ತದವರೆಗೆ ನಡೆಯಲಿರುವ ರೋಡ್ ಶೋ ನಲ್ಲಿ ಪ್ರಧಾನಿ ಭಾಗವಹಿಸಲಿದ್ದಾರೆ.

<><*<><>*><>

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು, ಮಹಾರಾಷ್ಟ್ರದ ಸಕೋಲಿಯಲ್ಲಿ ನಿನ್ನೆ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿ, ನಿರುದ್ಯೋಗ ಹಾಗೂ ಹಣದುಬ್ಬರದಂತಹ ಪ್ರಮುಖ ವಿಚಾರಗಳ ಬಗ್ಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಗಮನ ನೀಡುತ್ತಿಲ್ಲವೆಂದು ಆಪಾದಿಸಿದರು. ಕಾಶ್ಮೀರದಿಂದ ಕನ್ಯಾಕುಮಾರಿವರೆಗೆ ಕೈಗೊಳ್ಳಲಾದ ಭಾರತ ಜೋಡೊ ಸಂದರ್ಭದಲ್ಲಿ ಸಮಾಜದ ವಿವಿಧ ವರ್ಗಗಳ ಜನರೊಂದಿಗೆ ಸಂವಾದ ನಡೆಸಿದ್ದು, ಆ ಸಂದರ್ಭದಲ್ಲೂ ಕೂಡ ನಿರುದ್ಯೋಗ ಹಾಗೂ ಹಣದುಬ್ಬರ ವಿಚಾರಗಳೇ ಪ್ರಮುಖ ಸಮಸ್ಯೆಗಳಾಗಿ ಕಂಡುಬಂದಿವೆ ಎಂದರು. ಸರ್ಕಾರಿ ಹಾಗೂ ಇತರ ಪ್ರಮುಖ ಕ್ಷೇತ್ರಗಳಲ್ಲಿನ ಉನ್ನತ ಹುದ್ದೆಗಳಲ್ಲಿ ಹಿಂದುಳಿದ ವರ್ಗದವರಿಗೆ ಸಾಕಷ್ಟು ಪ್ರಾತಿನಿಧ್ಯ ಇಲ್ಲ ಎಂದು ರಾಹುಲ್ ಗಾಂಧಿ ಆಪಾದಿಸಿದರು.

ಕೇಂದ್ರ ಸಚಿವ ಹಾಗೂ ಹಿರಿಯ ಬಿಜೆಪಿ ಧುರೀಣ ಅಮಿತ್ ಶಾ ಅವರು, ಸಕೋಲಿಯಲ್ಲಿ ಇಂದು ಸಾರ್ವಜನಿಕ ಸಭೆಯನ್ನುದ್ದೇಶಿಸಿ ಪ್ರಚಾರ ಭಾಷಣ ಮಾಡುವ ಕಾರ್ಯಕ್ರಮವಿದೆ.

<><*<><>*><>

ಲೋಕಸಭೆ ಚುನಾವಣೆ ಹಿನ್ನೆಲೆ ಕಾಂಗ್ರೆಸ್ ಪಕ್ಷ ತನ್ನ ೧೬ ಅಭ್ಯರ್ಥಿಗಳ ಮತ್ತೊಂದು ಪಟ್ಟಿಯನ್ನು ನಿನ್ನೆ ಬಿಡುಗಡೆ ಮಾಡಿದೆ. ಪಟ್ಟಿಯಲ್ಲಿ ಗುಜರಾತ್‌ನ ೪, ಹಿಮಾಚಲ ಪ್ರದೇಶದ ೨, ಚಂಡೀಗಢ ೧ ಮತ್ತು ಒಡಿಶಾದ ೯ ಕ್ಷೇತ್ರಗಳಿಗೆ ಅಭ್ಯರ್ಥಿಗಳ ಹೆಸರುಗಳನ್ನು ಘೋಷಿಸಿದ್ದಾರೆ. ಕಾಂಗ್ರೆಸ್ ಸಂಸದ ಮನೀಶ್ ತಿವಾರಿ ಚಂಡೀಗಢ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ. ಕಾಂಗ್ರೆಸ್‌ನಿಂದ ಹಿಮಾಚಲ ಪ್ರದೇಶದ ಶಾಸಕ ವಿಕ್ರಮಾದಿತ್ಯ ಸಿಂಗ್, ಬಿಜೆಪಿ ಅಭ್ಯರ್ಥಿ ಕಂಗನಾ ರನೌತ್ ಮಂಡಿ ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ. ಮಾಜಿ ಕೇಂದ್ರ ಸಚಿವ ಶ್ರೀಕಾಂತ್ ಜೆನಾ ಒಡಿಶಾದ ಬಾಲಸೋರ್ ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ. ಇದೇ ವೇಳೆ ಗುಜರಾತ್‌ನ ವಿಧಾನಸಭಾ ಉಪಚುನಾವಣೆಗೂ ಕೂಡ ಕಾಂಗ್ರೆಸ್ ನಾಲ್ಕು ಅಭ್ಯರ್ಥಿಗಳ ಹೆಸರನ್ನು ಬಿಡುಗಡೆ ಮಾಡಿದೆ.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕಳೆದ ಹತ್ತು ವರ್ಷಗಳಲ್ಲಿ ಅಸಾಧ್ಯವೆನಿಸಿದ ಅನೇಕ ಕಾರ್ಯಕ್ರಮಗಳನ್ನು ಮಾಡಿ ತೋರಿಸಲಾಗಿದೆ ಎಂದು ಕೇಂದ್ರ ಸಚಿವ ಹಾಗೂ ಹಿರಿಯ ಬಿಜೆಪಿ ನಾಯಕ ಅಮಿತ್ ಶಾ ಹೇಳಿದ್ದಾರೆ. ಅವರು, ರಾಜಸ್ಥಾನದ ಅಲ್ವಾರದಲ್ಲಿ ನಿನ್ನೆ ಬಿಜೆಪಿ ಅಭ್ಯರ್ಥಿ ಬೆಂಬಲಿಸಿ ಮಾತನಾಡಿ, ಪ್ರಧಾನಮಂತ್ರಿ ಮೋದಿ ಅವರು, ಮುಂದಿನ ೨೫ ವರ್ಷಗಳಿಗಾಗಿ ಅಭಿವೃದ್ಧಿ ಯೋಜನೆಗಳನ್ನು ಹೊಂದಿದ್ದು, ಮೂರನೇ ಅವಧಿಗೆ ಪ್ರಧಾನಮಂತ್ರಿಯಾಗಿ ಸೇವೆ ಸಲ್ಲಿಸಲು ಅವಕಾಶ ನೀಡಬೇಕು ಎಂದು ಕೋರಿದರು. ಕಾಂಗ್ರೆಸ್ ಆಡಳಿತ ಸಂದರ್ಭದಲ್ಲಿ ದೇಶದ ಆಂತರಿಕ ಸುರಕ್ಷತಾ ಪರಿಸ್ಥಿತಿ ದುರ್ಬಲವಾಗಿತ್ತು ಎಂದು ಆಪಾದಿಸಿದ ಅವರು, ಕಾಂಗ್ರೆಸ್ ಹಿಂದುಳಿದ ವರ್ಗವನ್ನು ನಿರ್ಲಕ್ಷಿಸಿದೆ ಎಂದು ಆರೋಪಿಸಿದರು. ರಾಜಸ್ಥಾನ ಮುಖ್ಯಮಂತ್ರಿ ಭಜನ್‌ಲಾಲ್ ಶರ್ಮಾ ಅವರೂ ಕೂಡ ಬಿಜೆಪಿ ಅಭ್ಯರ್ಥಿ ಪರವಾಗಿ ರಾಜ್ಯದ ವಿವಿಧೆಡೆ ನಿನ್ನೆ ಚುನಾವಣಾ ರ್‍ಯಾಲಿಯಲ್ಲಿ ಪಾಲ್ಗೊಂಡು ಮತಯಾಚಿಸಿದರು. ಕಾಂಗ್ರೆಸ್ ಪರವಾಗಿ ಮಾಜಿ ಮುಖ್ಯಮಂತ್ರಿ ಅಶೋಕ್ ಗೆಹ್ಲೋಟ್ ಅವರು, ದೋಲಾಪುರದ ಬಾಸಾಯಿ ನವಾಬ್‌ನಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದರು. ರಾಜ್ಯ ಕಾಂಗ್ರೆಸ್ ಅಧ್ಯಕ್ಷ ಗೋವಿಂದ್ ಸಿಂಗ್ ದೋತಾಸರ ಹಾಗೂ ಹಿರಿಯ ಸಚಿನ್ ಪೈಲೆಟ್ ವಿವಿಧ ಸಾರ್ವಜನಿಕ ಸಭೆಗಳಲ್ಲಿ ಪಾಲ್ಗೊಂಡು ಪ್ರಚಾರ ಮಾಡಿದರು.

<><*<><>*><>

ಗೋವಾದ ನೌಕಾನೆಲೆ ಐಎನ್‌ಎಸ್ ಹಂಸದಲ್ಲಿ ಆಯೋಜಿಸಲಾಗಿರುವ ಸಮಾರಂಭದಲ್ಲಿಂದು ನೌಕಾ ಸಿಬ್ಬಂದಿ ಮುಖ್ಯಸ್ಥ ಅಡ್ಮಿರಲ್ ಆರ್.ಹರಿಕುಮಾರ್ ಅವರು, ರಾಷ್ಟ್ರಪತಿಯವರ ಪರವಾಗಿ ಶೌರ್ಯ ಹಾಗೂ ವಿಶಿಷ್ಟ ಸೇವಾ ಪ್ರಶಸ್ತಿಗಳನ್ನು ಪ್ರಧಾನ ಮಾಡಲಿದ್ದಾರೆ. ಶೌರ್ಯ, ನಾಯಕತ್ವ, ವೃತ್ತಿಪರತೆ ಹಾಗೂ ವಿಶಿಷ್ಟ ಸೇವೆ ಸಲ್ಲಿಸಿದ ಸಿಬ್ಬಂದಿಗೆ ಪ್ರಶಸ್ತಿ ನೀಡಲಾಗುತ್ತಿದೆ. ನಾವೊ ಸೇನಾ ಶೌರ್ಯ ಪದಕ, ನಾವೊ ಸೇನಾ ಕರ್ತವ್ಯ ಸಮರ್ಪಣೆ ಪದಕ ಹಾಗೂ ವಿಶಿಷ್ಟ ಸೇವಾ ಪದಕಗಳು ಇದರಲ್ಲಿ ಸೇರಿವೆ. ಇದೇ ಸಂದರ್ಭದಲ್ಲಿ ಹಡ್ಮಿರಲ್ ಆರ್.ಹರಿಕುಮಾರ್ ಅವರು, ಹಾರಾಟ ಸುರಕ್ಷತಾ ಕುರಿತಾದ ಕ್ಯಾಪ್ಟನ್ ರವಿ ದೀರ್ ಸ್ಮಾರಕ ಚಿನ್ನದ ಪದಕ ಹಾಗೂ ಶಸ್ತ್ರಾಸ್ತ್ರ ಸುಧಾರಣೆ ಮತ್ತು ಎಲೆಕ್ಟ್ರಿಕಲ್ ಇಂಜಿನಿಯರಿಂಗ್ ಸಂಶೋಧನೆ ಕುರಿತಾದ ಲೆಫ್ಟಿನೆಂಟ್ ವಿ.ಕೆ.ಜೈನ್ ಸ್ಮಾರಕ ಚಿನ್ನದ ಪದಕವನ್ನೂ ಕೂಡ ವಿತರಣೆ ಮಾಡಲಿದ್ದಾರೆ.

<><*<><>*><>

ಅಬಕಾರಿ ನೀತಿ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ತಮ್ಮನ್ನು ಬಂಧಿಸಿರುವುದನ್ನು ಪ್ರಶ್ನಿಸಿ ದೆಹಲಿ ಮುಖ್ಯಮಂತ್ರಿ ಹಾಗೂ ಆಮ್‌ಆದ್ಮಿ ಪಕ್ಷದ ಧುರೀಣ ಅರವಿಂದ್ ಕೇಜ್ರಿವಾಲ್ ಸಲ್ಲಿಸಿರುವ ಮನವಿಯನ್ನು ಸುಪ್ರಿಂಕೋರ್ಟ್ ನಾಳೆ ವಿಚಾರಣೆಗೆ ಕೈಗೆತ್ತಿಕೊಳ್ಳಲಿದೆ. ನ್ಯಾಯಮೂರ್ತಿ ಸಂಜೀವ್ ಖನ್ನಾ ಹಾಗೂ ನ್ಯಾಯಮೂರ್ತಿ ದೀಪಂಕರ್ ದತ್ತಾ ಅವರನ್ನೊಳಗೊಂಡ ಪೀಠ ವಿಚಾರಣೆ ನಡೆಸಲಿದೆ. ಇದೇ ವಿಚಾರ ಕುರಿತಂತೆ ಕೇಜ್ರಿವಾಲ್ ಅವರು, ಸಲ್ಲಿಸಿದ್ದ ಮನವಿಯನ್ನು ದೆಹಲಿ ಹೈಕೋರ್ಟ್ ಈ ತಿಂಗಳ ೯ ರಂದು ತಿರಸ್ಕರಿಸಿದ್ದು, ಮುಖ್ಯಮಂತ್ರಿ ಕೇಜ್ರಿವಾಲ್ ಬಂಧನಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಸಾಕಷ್ಟು ದಾಖಲೆಗಳನ್ನು ಹೊಂದಿದೆ ಎಂದು ತಿಳಿಸಿದೆ. ದೆಹಲಿ ಅಬಕಾರಿ ನೀತಿ ಹಾಗೂ ಹಣಕಾಸು ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಅರವಿಂದ್ ಕೇಜ್ರಿವಾಲ್ ಅವರನ್ನು ಮಾರ್ಚ್ ೨೧ ರಂದು ಬಂಧಿಸಿದ್ದು, ಹಾಗೂ ಏಪ್ರಿಲ್ ೧ ರಂದು ನ್ಯಾಯಾಲಯ ಅವರನ್ನು ಈ ತಿಂಗಳ ೧೫ರವರೆಗೆ ನ್ಯಾಯಾಂಗ ವಶಕ್ಕೆ ಒಪ್ಪಿಸಿದೆ.

<><*<><>*><>

ರಾಷ್ಟ್ರೀಯ ಜನತಾದಳ ಆರ್‌ಜೆಡಿ ಮುಂಬರುವ ಲೋಕಸಭಾ ಚುನಾವಣೆಗಾಗಿ ತನ್ನ ಪ್ರಣಾಳಿಕೆ ಬಿಡುಗಡೆ ಮಾಡಿದೆ. ಆರ್‌ಜೆಡಿ ನಾಯಕ ತೇಜಸ್ವಿ ಪ್ರಸಾದ್ ಯಾದವ್ ಅವರು, ಪಾಟ್ನಾದಲ್ಲಿ ನಿನ್ನೆ ಪಕ್ಷದ ಹಿರಿಯ ನಾಯಕರೊಂದಿಗೆ 'ಪರಿವರ್ತನ್ ಪಾತ್ರ' ಹೆಸರಿನ ಚುನಾವಣೆ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದರು. ದೇಶಾದ್ಯಂತ ಒಂದು ಕೋಟಿ ಸರ್ಕಾರಿ ನೌಕರಿ ಸೃಷ್ಟಿ, ಬಡ ಕುಟುಂಬದ ಮಹಿಳೆಗೆ ವಾರ್ಷಿಕ ಒಂದು ಲಕ್ಷ ರೂಪಾಯಿ ಹಣಕಾಸು ನೆರವು ಇದರಲ್ಲಿ ಸೇರಿವೆ.

ಇದಲ್ಲದೆ, ೨೪ ಭರವಸೆಗಳನ್ನು ಒಳಗೊಂಡ ಜನವಚನ ಪ್ರಣಾಳಿಕೆ ಜಾರಿಗೊಳಿಸಲು ಪಕ್ಷ ಬದ್ಧ ಎಂದು ತಿಳಿಸಲಾಗಿದೆ.

<><*<><>*><>

ಬೇಳೆ ಕಾಳುಗಳ ಮುನ್ನ ವ್ಯಾಪಾರದಲ್ಲಿ ತೊಡಗುವವರ ವಿರುದ್ಧ ಅವಶ್ಯಕ ಸಾಮಗ್ರಿ ಕಾಯ್ದೆಯಡಿ ಕಾನೂನು ರೀತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಕೇಂದ್ರ ಸರ್ಕಾರ ಹೇಳಿದೆ. ಗ್ರಾಹಕ ವ್ಯವಹಾರಗಳ ಖಾತೆ ಕಾರ್ಯದರ್ಶಿ ನಿಧಿ ಖರೆ ಈ ವಿಷಯ ತಿಳಿಸಿದ್ದಾರೆ. ನಾಳೆಯಿಂದ ಆನ್‌ಲೈನ್ ದಾಸ್ತಾನು ನಿಗಾ ಪದ್ಧತಿ ಕಾರ್ಯಾಚರಣೆಗೆ ಬರುತ್ತಿರುವ ಹಿನ್ನೆಲೆಯಲ್ಲಿ ಅವರು, ಬೇಳೆ ಕಾಳು ಉದ್ಯಮದ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಿ ಮಾತನಾಡಿದರು.

<><*<><>*><>

ಜಮ್ಮುವಿನ ರಿಯಾಸಿ ಜಿಲ್ಲೆಯಲ್ಲಿ ಭದ್ರತಾ ಪಡೆ, ಭಯೋತ್ಪಾದಕರ ಅಡಗುತಾಣದ ಮೇಲೆ ನಿನ್ನೆ ದಾಳಿ ನಡೆಸಿ, ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಂಡಿದೆ. ನಿಖರವಾದ ಮಾಹಿತಿ ಮೇರೆಗೆ ರಾಷ್ಟ್ರೀಯ ರೈಫಲ್‌ನ ೫೮ನೇ ಬೆಟಾಲಿಯನ್ ಹಾಗೂ ಪೊಲೀಸ್ ಪಡೆಗಳು ಕಾರ್ಯಾಚರಣೆ ನಡೆಸಿ ಪಿಸ್ತೂಲ್ ಹಾಗೂ ಎಕೆ-೪೭ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಂಡಿವೆ.

<><*<><>*><>

ಚಂಡೀಗಢದ ಮುಲ್ಲಾನ್‌ಪುರದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ತಂಡ, ರಾಜಸ್ತಾನ್ ರಾಯಲ್ಸ್ ತಂಡದ ವಿರುದ್ಧ ೩ ವಿಕೆಟ್ ಗಳಿಂದ ಗೆಲುವು ಸಾಧಿಸಿತು. ಮೊದಲು ಬ್ಯಾಟ್ ಮಾಡಿದ ಪಂಜಾಬ್ ಕಿಂಗ್ಸ್, ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೪೭ ರನ್ ಗಳಿಸಿತು. ತಂಡ ಪರ ವೈಯಕ್ತಿಕ ಗರಿಷ್ಠ ರನ್ ಮಾಡಿದ ಅಶುತೋಷ್ ಶರ್ಮಾ ೩೧ ರನ್ ಗಳಿಸಿದರು. ರಾಜಸ್ಥಾನ ರಾಯಲ್ಸ್ ಬೌಲರ್‌ಗಳ ಪರ ಆವೇಶ್ ಖಾನ್ ಮತ್ತು ಕೇಶವ ಮಹಾರಾಜ್ ತಲಾ ವಿಕೆಟ್ ಪಡೆದರು. ಉತ್ತರವಾಗಿ ೧೪೮ ರನ್‌ಗಳ ಗುರಿ ಬೆನ್ನತ್ತಿದ ರಾಜಸ್ಥಾನ ರಾಯಲ್ಸ್ ತಂಡ ಕೇವಲ ಒಂದು ಎಸೆತ ಇರುವಂತೆ ೭ ವಿಕೆಟ್ ನಷ್ಟಕ್ಕೆ ೧೫೨ ರನ್‌ಗಳಿಸಿ ವಿಜಯೋತ್ಸವ ಆಚರಿಸಿತು. ಯಶಸ್ವಿ ಜೈಸ್ವಾಲ್ ೩೯ ಮತ್ತು ಶಿಮ್ರಾನ್ ಹೆಟ್‌ಮೈಯರ್ ಅಜೇಯ ೨೭ ರನ್‌ಗಳಿಸಿ ತಂಡಕ್ಕೆ ಗೆಲುವು ತಂದುಕೊಟ್ಟರು. ಇಂದು ಎರಡು ಪಂದ್ಯಗಳು ನಡೆಯಲಿವೆ. ಕೊಲ್ಕಾತ್ತಾದ ಈಡನ್‌ಗಾರ್ಡನ್ಸ್ ಮೈದಾನದಲ್ಲಿ ಅಪರಾಹ್ನ ೩.೩೦ ಕ್ಕೆ ನಡೆಯಲಿರುವ ಮೊದಲ ಪಂದ್ಯದಲ್ಲಿ ಕೊಲ್ಕತಾ ನೈಟ್ ರೈಡರ್ಸ್ ಮತ್ತು ಲಖ್ನೌ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ.

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ರಾತ್ರಿ ೭.೩೦ ಕ್ಕೆ ಆರಂಭವಾಗಲಿರುವ ಮತ್ತೊಂದು ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಮತ್ತು ಚೆನ್ನೈ ಸೂಪರ್‌ಕಿಂಗ್ಸ್ ತಂಡಗಳು ಸೆಣಸಲಿವೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ <>*><>**